**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ದಶಪ್ರಮತಿ ಎಜುಕೇಷನಲ್ ಟ್ರಸ್ಟ್ (ರಿ), ಬೆಂಗಳೂರು ಇವರು ಅಕ್ಷರ ಇನ್ಸ್‌ಟಿಟ್ಯೂಟ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ವರದಿ ಸಂಖ್ಯೆ:ಔನಿಇ/330/ಯೋಜನೆ/2018-19, ದಿನಾಂಕ: 13.08.2020.
2. ದಿನಾಂಕ:18.09.2020ರಂದು ನಡೆದ ಉನ್ನತ ಮಟ್ಟದ ಸಮಿತಿ ಸಭೆಯ ನಡೆವಳಿಗಳು.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ (1)ರ ವರದಿಯಲ್ಲಿ, ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ ಇವರು ದಶಪ್ರಮತಿ ಎಜುಕೇಷನಲ್ ಟ್ರಸ್ಟ್ (ರಿ), ಬೆಂಗಳೂರು ಇವರು ಹೊಸದಾಗಿ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ವಿಷಯಕ್ಕೆ ಸಂಬಂಧಿಸಿದಂತೆ, ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಬೆಂಗಳೂರು ಇವರು ಸಲ್ಲಿಸಿರುವ ಪರಿವೀಕ್ಷಣಾ ವರದಿಯನುಸಾರ ಸದರಿ ಸಂಸ್ಥೆಯು ನಿಯಮನುಸಾರ ಅಗತ್ಯ ಸೌಲಭ್ಯಗಳನ್ನು ಹೊಂದಿದ್ದು, ಪ್ರವೇಶ ಪ್ರಕ್ರಿಯೆ ಆರಂಭಗೊಳ್ಳುವ ಮುನ್ನ ಭಾರತೀಯ ಫಾರ್ಮಸಿ ಪರಿಷತ್ತಿನ ಅನುಮತಿ ಪಡೆಯಬೇಕೆಂಬ ಷರತ್ತಿನೊಂದಿಗೆ ಸರ್ವೆ ನಂ. 1/4, ನಂ. 241 & 243, ಪರಗೋಡು ಗ್ರಾಮ, ಬಾಗೆಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇಲ್ಲಿ ಅಕ್ಷರ ಇನ್ಸ್‌ಟಿಟ್ಯೂಟ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ 2020-21ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಹೊಸದಾಗಿ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಕುರಿತು ಕ್ರಮ ಕೈಗೊಳ್ಳಬಹುದಾಗಿದೆ ಎಂಬ ಅಭಿಪ್ರಾಯವನ್ನು ನೀಡಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (2)ರ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ ಸದರಿ ಸಂಸ್ಥೆಗೆ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ 2020-21ನೇ ಶೈಕ್ಷಣಿಕ ಸಾಲಿನಿಂದ ಪ್ರಥಮ ಡಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಲು ಶಿಫಾರಸು ಮಾಡಲಾಗಿದೆ.

ಔಷಧ ನಿಯಂತ್ರಕರ ವರದಿ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ದಶಪ್ರಮತಿ ಎಜುಕೇಷನಲ್ ಟ್ರಸ್ಟ್ (ರಿ), ಬೆಂಗಳೂರು ಇವರು 2020-21ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಅಕ್ಷರ ಇನ್ಸ್‌ಟಿಟ್ಯೂಟ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ ಹೊಸದಾಗಿ ಪ್ರಥಮ ಡಿ.ಫಾರ್ಮಸಿ ಕೋರ್ಸ್‌ನ್ನು ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಹಾಗೂ ಅಗತ್ಯವಿರುವ ಇತರೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆಯನ್ನು ಪಡೆಯುವ ಷರತ್ತಿಗೊಳಪಟ್ಟು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 107 ಪಿಟಿಡಿ 2020, ಬೆಂಗಳೂರು, ದಿನಾಂಕ:19.10.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಶಪ್ರಮತಿ ಎಜುಕೇಷನಲ್ ಟ್ರಸ್ಟ್ (ರಿ), ಬೆಂಗಳೂರು ಇವರು ಸರ್ವೆ ನಂ. 1/4, ನಂ. 241 & 243, ಪರಗೋಡು ಗ್ರಾಮ, ಬಾಗೆಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇಲ್ಲಿ ಅಕ್ಷರ ಇನ್ಸ್‌ಟಿಟ್ಯೂಟ್ ಆಫ್ ಫಾರ್ಮಸಿ ಎಂಬ ಹೆಸರಿನಲ್ಲಿ 2020-21ನೇ ಶೈಕ್ಷಣಿಕ ಸಾಲಿನಿಂದ 60 (ಅರವತ್ತು) ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಹೊಸದಾಗಿ ಪ್ರಥಮ ಡಿ.ಫಾರ್ಮಸಿ

19/10

. . . . 2

ಕೋರ್ಸ್ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಡಿ.ಫಾರ್ಮಸಿ ಕಾಲೇಜು/ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಇವರಿಂದ ಅನುಮೋದನೆಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4. ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು/ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
8. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
9. ಸಂಸ್ಥೆಯ ಆರ್ಥಿಕ ಸ್ಥಿತಿಯನ್ನು ಔಷಧ ನಿಯಂತ್ರಕರು ಖಚಿತಪಡಿಸಿಕೊಳ್ಳುವುದು.
10. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಎಸ್. ನಾಗರಾಜ್)
ಸರ್ಕಾರದ ಉಪ ಕಾರ್ಯದರ್ಶಿ-3
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

**ಇವರಿಗೆ:**

1) ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು.
3) ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ. ಕಾಳಿಂಗರಾವ್ ರಸ್ತೆ, ಬೆಂಗಳೂರು-560 027.
4) ಧರ್ಮದರ್ಶಿ, ದಶಪ್ರಮತಿ ಎಜುಕೇಷನಲ್ ಟ್ರಸ್ಟ್ (ರಿ), ನಂ. 22/7, ಎಂ.ಜಿ.ಕೆ.ಮೂರ್ತಿ ಲೇಔಟ್, ಚಾಮರಾಜಪೇಟೆ, ಬೆಂಗಳೂರು.

**ಪ್ರತಿಗಳು:-**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.